# ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಬೇಲೂರು.

**ಸಿ ಸಿ ನಂಃ 29/2018**

| | | |
|---|---|---|
| ಹೆಸರು | ಅರವಿಂದ | ದಿಃ **07-07-2022** |
| ತಂದೆ ಹೆಸರು | ಕೆಂಚೇಗೌಡ | |
| ವಯಸ್ಸು | 39 ವರ್ಷ | ಪಿಡಬ್ಲ್ಯುಃ 2 |
| ಉದ್ಯೋಗ | ವ್ಯವಸಾಯ | ಸಿಡಬ್ಲ್ಯುಃ 2 |
| ವಾಸ | ಚನ್ನಾಪುರ | ವಿಧಿ ಬದ್ಧವಾಗಿ ಪ್ರಮಾಣೀಕರಿಸಲಾಯಿತು. |

## ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನನಗೆ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಯ ಪರಿಚಯ ಇರುತ್ತದೆ.

ನನಗೆ ಚಾಸಾ-1 ರವರ ಪರಿಚಯ ಇರುತ್ತದೆ.

ಈಗ ತೋರಿಸಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸದರಿ ದಾಖಲೆ ಕೃತ್ಯ ಸ್ಥಳದ ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರ್ತಿಸಿದ್ದು ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರ್ತಿಸಲಾಯಿತು.

ಈಗ ತೋರಿಸಿರುವ ಮತ್ತೊಂದು ದಾಖಲೆಯನ್ನು ತೋರಿದ್ದು ಸದರಿ ದಾಖಲೆ ಮಾದರಿ ಸೀಲಿನ ನಕಲು ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಸಾಕ್ಷಿ ಸಹಿಯನ್ನು ನಿಪಿ-2(ಬಿ) ಎಂದು ಗುರ್ತಿಸಲಾಯಿತು.

ನಿಪಿ-1 ಮತ್ತು 2 ರಲ್ಲಿರುವ ಸಹಿಗಳನ್ನು ಎರಡು ವರ್ಷಗಳ ಹಿಂದೆ ಬೇಲೂರಿನ ಬಸ್ ಸ್ಟಾಂಡ್ ನಲ್ಲಿ ಮಾಡಿರುತ್ತೇನೆ.

ನಿಪಿ-1 ಮತ್ತು 2 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈಗ ತೋರಿಸಿದ ಒಂದು ಪ್ಲಾಸ್ಟಿಕ್ ಬಾಟಲ್ ನ್ನು ನೋಡಿ ಗುರ್ತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು.)

## ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ದಿಃ **17-09-2016** ರಂದು ಬೆಳಗ್ಗೆ 6 ಗಂಟೆ ಸಮಯದಲ್ಲಿ ಅಬಕಾರಿ ಉಪನಿರೀಕ್ಷಕರು, ಸಿಬ್ಬಂದಿಯೊಂದಿಗೆ ಚನ್ನಾಪುರ ಗ್ರಾಮಕ್ಕೆ ಬಂದು ಗ್ರಾಮದಲ್ಲಿದ್ದ ನನ್ನನ್ನು ಹಾಗೂ ಚಾಸಾ-1 ರವರನ್ನು ಕರೆದು ಬಂದ ಮಾಹಿತಿ ತಿಳಿಸಿ ದಾಳಿ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ಕೋರಿದ್ದು ನಾವು ಅದಕ್ಕೆ ಒಪ್ಪಿದ ಕಾರಣ ನಮ್ಮನ್ನು ಕರೆದುಕೊಂಡು ಆರೋಪಿ ಮನೆಯ ಹತ್ತಿರ ಹೋಗಿ ಆರೋಯನ್ನು ಕೂಗಿ

ಕರೆದು ಬಂದ ಮಾಹಿತಿಯನ್ನು ತಿಳಿಸಿ ಸ್ಥಳದಲ್ಲಿ ಶೋಧನಾ ಸಮುಚಿತ ಆಧಾರವನ್ನು ತಯಾರಿಸಿ ಮನೆಯನ್ನು ಶೋಧನೆ ಮಾಡಿದಾಗ ಮನೆಯ ಒಳಗೆ 2 ಲೀ ಸಾಮರ್ಥ್ಯದ ಹಸಿರು ಬಣ್ಣದ ಪ್ಲಾಸ್ಟಿಕ್ ಬಾಟಲಿಯಲ್ಲಿ ಕಳ್ಳಭಟ್ಟಿ ಸಾರಾಯಿ ಇರುವುದು ಕಂಡುಬಂತು ಎಂದರೆ ಸರಿಯಲ್ಲ. ಅಲ್ಲೇ ಇದ್ದ ವ್ಯಕ್ತಿಯನ್ನು ವಿಚಾರಿಸಿದಾಗ ಇದು ನನಗೆ ಸೇರಿದ್ದು ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಹಾಜರಿದ್ದ ವ್ಯಕ್ತಿಯನ್ನು ಹೆಸರು ಮತ್ತು ವಿಳಾಸ ಕೇಳಲಾಗಿ ಮಂಜುನಾಥ ಬಿನ್ ಹೆಚ್ ಈರೇಗೌಡ ಚನ್ನಾಪುರ ಗ್ರಾಮ, ಬೇಲೂರು ತಾಲ್ಲೂಕು ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ದೊರೆತ ಕಳ್ಳಭಟ್ಟಿ ಸಾರಾಯಿಯಿಂದ ಎಫ್ ಎಸ್ ಎಲ್ ಗಾಗಿ 500 ಎಂ ಎಲ್ ನ ಒಂದು ಪ್ಲಾಸ್ಟಿಕ್ ಬಾಟಲಿಯಲ್ಲಿ ಕಳ್ಳಭಟ್ಟಿ ಸಾರಾಯಿಯನ್ನು ಮಾದರೆಗೆ ತೆಗೆದು ಬಟ್ಟೆಯಿಂದ ಸುತ್ತಿ ದಾರದಿಂದ ಕಟ್ಟಿ ನಮ್ಮ ಸಹಿ ಇರುವ ಚೀಟಿಯನ್ನು ಅಂಟಿಸಿ ಇಲಾಖಾ ಸೀಲು ಹಾಕಲಾಯಿತು ಎಂದರೆ ಸರಿಯಲ್ಲ. ನಂತರ ದೊರೆತ ಸ್ವತ್ತುಗಳನ್ನು ನನ್ನ ಹಾಗೂ ಚಾಸಾ-1 ರವರ ಸಮಕ್ಷಮ ಬೆಳಗ್ಗೆ 06:15 ರಿಂದ 07:30 ರವರೆಗೆ ನಿಪಿ-1 ರಂತೆ ಮಹಜರ್ ಮೂಲಕ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-1 ಮತ್ತು 2 ಕ್ಕೆ ನಾನು ಓದಿ ನೋಡಿ ಸ್ಥಳದಲ್ಲೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ನಮ್ಮ ಊರಿನವರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

## ಪಾಟೀ ಸವಾಲುಃ ಆರೋಪಿ/ಗಳ ಪರ ವಕೀಲರಾದ ಶ್ರೀ ಜಿ ಸಿ ಪಿ ರವರಿಂದಃ

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸುತ್ತಾರೆ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**

**ಓ. ಹೇ. ಕೇ. ಸರಿ. ಇದೆ**

**(ಪ್ರಸನ್ನಕುಮಾರ್ ಸಿ.)**
**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.**
**ಬೇಲೂರು.**